**3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು**
**ಸಿ.ಸಿ.ನಂ. 4690/2025**

ದಿನಾಂಕಃ **28.07.2026** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಸಾಕ್ಷಿಯ ಹೆಸರು | ನವೀನ | ಚಾಸಾ-3, ಪ್ರಾಸ-2 |
| ತಂದೆಯ ಹೆಸರು | ಗೋವಿಂದಪ್ಪ | |
| ವಯಸ್ಸು | 32 ವರ್ಷ | |
| ಉದ್ಯೋಗ | ಚಾಲಕ | |
| ವಾಸ | ಹುಲ್ಲೇಹಳ್ಳಿ | |

ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ-2 ನನಗೆ ಗೊತ್ತು. ಆರೋಪಿ ನನಗೆ ಗೊತ್ತು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನನಗೆ ಯಾವುದೇ ಮಾಹಿತಿ ಇಲ್ಲಾ. ನನ್ನ ಸಮಕ್ಷಮ ಪೋಲಿಸರು ಯಾವುದೇ ಮಹಜರ್ ಕ್ರಮ ಜರುಗಿಸಿರುವುದಿಲ್ಲ ಮತ್ತು ಯಾವುದೇ ವಸ್ತುವನ್ನು ವಶಪಡಿಸಿಕೊಂಡಿರುವುದಿಲ್ಲ. ಈ ಸಂಬಂಧ ನಾನು ಯಾವುದೇ ಹೇಳಿಕೆ ನೀಡಿರುವುದಿಲ್ಲ. ಸಾಕ್ಷಿ ನಿಪಿ-1 ರಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಬಿ) ಎಂದು, ಸಾಕ್ಷಿ ನಿಪಿ-2 ರಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ-3 ರ ಛಾಯಾಚಿತ್ರದಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿ ಮುಮಾ-1 ರಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ಮುಮಾ-1(ಬಿ) ಎಂದು ಗುರುತಿಸಲಾಯಿತು.

ನಿಪಿ-1 ಮತ್ತು 2 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ನನ್ನೊಂದಿಗೆ ಬೇರೆ ಯಾರು ಸಹಿ ಮಾಡಿರುತ್ತಾರೆ ಎಂದು ತಿಳಿದಿಲ್ಲ. ಮುಮಾ-1 ನ್ನು ಎಲ್ಲಿಂದ ಮತ್ತು ಯಾವಾಗ ವಶಪಡಿಸಿಕೊಳ್ಳಲಾಯಿತು ಎಂದು ನನಗೆ ಗೊತ್ತಿಲ್ಲ. ನಿಪಿ-3 ನ್ನು ಯಾವ ವಿಚಾರವಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಅಭಿಯೊಜನೆಯ ಪ್ರಕರಣಕ್ಕೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)

ಪಾಟೀಸವಾಲುಃ ಮಾನ್ಯ ಸಸಅ. ರವರಿಂದ ಃ

ದಿಃ 09.11.2025 ರಂದು ಬೀರೂರು ಪೋಲಿಸರು ಸಂಜೆ 7.00 ಗಂಟೆ ಸಮಯಕ್ಕೆ ಕೋಡಿಹಳ್ಳಿ ಗ್ರಾಮದ ರಂಗಪ್ಪ ಲೇಔಟ್ ಬಳಿ ನಾನು ಮತ್ತು ಚಾಸಾ-2 ರವರು ಮಾತನಾಡುತ್ತಾ ನಿಂತಿದ್ದಾಗ ಪೋಲಿಸರು ಬಂದು ರಂಗಪ್ಪ ಲೇಔಟ್ ನ ಸಾರ್ವಜನಿಕ ರಸ್ತೆಯಲ್ಲಿ ಅಕ್ರಮವಾಗಿ ಮದ್ಯ ಮಾರಾಟ

ಮಾಡುತ್ತಿರುವ ಬಗ್ಗೆ ಮಾಹಿತಿ ಬಂದಿದ್ದು ಪಂಚರಾಗಿ ಸಹಕರಿಸುವಂತೆ ನಮಗೆ ನಿಪಿ-1 ರ ನೋಟಿಸನ್ನು ನೀಡಿ ಕೇಳಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ನಾವುಗಳು ಒಪ್ಪಿದ್ದು ಅದೇ ಇಲಾಖಾ ಜೀಪಿನಲ್ಲಿ ಜೀಪು ನಿಲ್ಲಿಸಿ ನೋಡಿದಾಗ ಒಬ್ಬ ವ್ಯಕ್ತಿಯು ಒಂದು ಪ್ಲಾಸ್ಟಿಕ್ ಚೀಲವನ್ನು ಹಿಡಿದುಕೊಂಡು ಓಡಿ ಹೋಗಲು ಪ್ರಯತ್ನಿಸಿರುತ್ತಾನೆ ಎಂದರೆ ಸರಿಯಲ್ಲ. ಆತನನ್ನು ಪೋಲಿಸರು ಹಿಡಿದು ಆತನ ಬಳಿ ಇದ್ದ ಚೀಲವನ್ನು ಪರಿಶೀಲಿಸಿದಾಗ ಅದರಲ್ಲಿ ಮದ್ಯದ ಪೌಚುಗಳು ಇದ್ದವು ಎಂದರೆ ಸರಿಯಲ್ಲ. ಆತನ ಹೆಸರು ವಿಳಾಸ ಕೇಳಲಾಗಿ ಆತನ ಹೆಸರು ರೇವಂತ್ ಹೆಚ್ ಮತ್ತು ಆತನ ಬಳಿ ಮದ್ಯ ಮಾರಾಟ ಮಾಡಲು ಯಾವುದೇ ಪರವಾನಗಿ ಇಲ್ಲಾ ಎಂದು ತಿಳಿಸಿರುತ್ತಾನೆ ಎಂದರೆ ಸರಿಯಲ್ಲ. ನಂತರ ನಮ್ಮಗಳ ಸಮಕ್ಷಮ ಚೀಲವನ್ನು ಪರಿಶೀಲಿಸಿ ನೋಡಿದಾಗ ಸದರಿ ಚೀಲವು ಬಿಳಿ ಬಣ್ಣದ ಪ್ಲಾಸ್ಟಿಕ್ ಚೀಲವಾಗಿದ್ದು ಅದರಲ್ಲಿದ್ದ ಮದ್ಯವನ್ನು ನೆಲದ ಮೇಲೆ ಸುರಿದು ನೋಡಿದಾಗ 90 ಎಂಎಲ್ ನ ರಾಜಾವಿಸ್ಕಿ ಎಂದು ಬರೆದಿರುವ 20 ಮದ್ಯದ ಪೌಚುಗಳು, ಓಲ್ಡ್ ಟವರಿನ್ ನ 90 ಎಂಎಲ್ ನ 10 ಪೌಚುಗಳು ಇದ್ದವು ಎಂದರೆ ಸರಿಯಲ್ಲ. ಇವುಗಳ ಒಟ್ಟು ಅಂದಾಜು ಬೆಲೆ ರೂ. 1,600-00 ಆಗಿರುತ್ತದೆ ಎಂದು ನಾವುಗಳು ಅಭಿಪ್ರಾಯ ಪಟ್ಟಿರುತ್ತೇವೆ ಎಂದರೆ ಸರಿಯಲ್ಲ. ನಂತರ ಎಲ್ಲಾ ಮದ್ಯವನ್ನು ಅದೇ ಬಿಳಿ ಬಣ್ಣದ ಪ್ಲಾಸ್ಟಿಕ್ ಚೀಲದಲ್ಲಿ ಹಾಕಿ ಅದರ ಬಾಯನ್ನು ದಾರದಿಂದ ಕಟ್ಟಿ ಪಿ ಎಂಬ ಅಕ್ಷರದಿಂದ ಸೀಲು ಮಾಡಿ ನಮ್ಮಗಳ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಮಹಜರನ್ನು ನಿಪಿ-2 ರಂತೆ ಸಂಜೆ 7.15 ರಿಂದ 8.00 ರವರೆಗೆ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಅದೇ ಸಮಯದಲ್ಲಿ ನಿಪಿ-3 ರಂತೆ ಛಾಯಾಚಿತ್ರವನ್ನು ತೆಗೆಸಿರುತ್ತಾರೆ ಎಂದರೆ ಸರಿಯಲ್ಲ. ದಿಃ 12.11.2025 ರಂದು ಪೋಲಿಸರ ಮುಂದೆ ಈಗ ಓದಿ ಹೇಳಿದಂತೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ಸಾಕ್ಷಿ ಅಲ್ಲಗಳೆದ ಕಾರಣ ಅದನ್ನು ನಿಪಿ-5 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀಸವಾಲುಃ ಆರೋಪಿ ಪರ ವಕೀಲರಿಂದ ಃಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ

Sd/-
3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.